ಶ್ರೀ ಎಂ. ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು) :

ಅ) ಹೌದು

ಆ) ತುಮಕೂರು ಜಿಲ್ಲೆಗೆ 1996-97ನೇ ಸಾಲಿಗೆ ಹಣ ಬಿಡುಗಡೆಗಾಗಿ ಪ್ರಸ್ತಾವನೆಯನ್ನು ದಿನಾಂಕ 17-9-96ರಂದು ಭಾರತ ಸರ್ಕಾರಕ್ಕೆ ಸಲ್ಲಿಸಲಾಗಿತ್ತು. ಆದರೆ, ಜಿಲ್ಲಾಪಂಚಾಯತ್‌ನವರು ಸಾಂಸ್ಥಿಕ ಸಿದ್ಧತೆಗಳನ್ನು ಪೂರ್ಣಗೊಳಿಸಿಲ್ಲವಾದ ಕಾರಣ ಹಣ ಬಿಡುಗಡೆ ಮಾಡಲು ಸಾಧ್ಯವಿಲ್ಲವೆಂದು ಭಾರತ ಸರ್ಕಾರದವರು ತಿಳಿಸಿದ್ದರು. ಈಗ ಜಿಲ್ಲಾ ಪಂಚಾಯತ್ ತುಮಕೂರು ಇವರು ಸಾಂಸ್ಥಿಕ ಸಿದ್ಧತೆಗಳನ್ನೆಲ್ಲಾ ಪೂರ್ಣಗೊಳಿಸಿ ಮರು ಪ್ರಸ್ತಾವನೆಯನ್ನು ದಿನಾಂಕ13-3-1997ರಂದು ಸಲ್ಲಿಸಿರುತ್ತಾರೆ. ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ದಿನಾಂಕ 17-3-97ರಂದು ಭಾರತ ಸರ್ಕಾರಕ್ಕೆ ಕಳುಹಿಸುತ್ತಾ ಹಣ ಬಿಡುಗಡೆ ಮಾಡುವಂತೆ ಕೋರಲಾಗಿದೆ. ಈ ಆರ್ಥಿಕ ವರ್ಷದ ಅಂತ್ಯದಲ್ಲಿ ಅನುದಾನವನ್ನು ನಿರೀಕ್ಷಿಸಬಹುದಾಗಿದೆ.

ರಾಜ್ಯದ ಸರ್ಕಾರಿ ಖಾಸಗಿ ಕಾಲೇಜುಗಳಲ್ಲಿ ಕೆಲಸಮಾಡುವತ್ತಿರುವ ಅರೆಕಾಲಿಕ ಉಪನ್ಯಾಸಕರನ್ನು ಖಾಯಂ ಗೊಳಿಸುವುದು.

768 - ಡಾ: ಎಂ. ಪಿ. ಕರ್ಕಿ (ಕುಮಟಾ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಅರೆಕಾಲಿಕ ಉಪನ್ಯಾಸಕರು ಸರ್ಕಾರಿ ಖಾಸಗೀ ಕಾಲೇಜುಗಳಲ್ಲರುವ ಸಂಖ್ಯೆಯಷ್ಟು;

ಆ) ಈ ಶಿಕ್ಷಕರನ್ನು ಖಾಯಂ ಮಾಡುವ ವಿಚಾರ ಸರ್ಕಾರಕ್ಕಿದೆಯೇ, ಇದ್ದರೆ ಯಾವ ಷರತ್ತುಗಳ ಆಧಾರದ ಮೇಲೆ.

ಇ) ಖಾಯಂ ಮಾಡಬೇಕಿಂದಿದ್ದರೆ ಹಾಗೂ ಅದನ್ನು ಅನುಷ್ಠಾನಗೊಳಿಸಲು ಎಷ್ಟು ಕಾಲಾವಕಾಶ ಬೇಕಾಗಬಹುದು?

ಶ್ರೀ ಬಿ. ಸೋಮಶೇಖರ್ (ಉನ್ನತ ಶಿಕ್ಷಣ ಸಚಿವರು) :

ಅ) 1) ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ - 2750

2) ಖಾಸಗಿ ಅನುದಾನಿಕ ಕಾಲೇಜುಗಳಲ್ಲಿ - 2335
(ದಿನಾಂಕ : 31-3-96 ರಲ್ಲಿದ್ದಂತೆ)

ಆ) ಹೌದು

1994-95ನೇ ಸಾಲಿನಲ್ಲಿ ಸೇವೆಯಲ್ಲಿದ್ದು ಶೈಕ್ಷಣಿಕ ವರ್ಷದ ಅಂತ್ಯಕ್ಕೆ ಸಂಬಂಧಿಸಿದಂತೆ ಕನಿಷ್ಠ ಎರಡು ವರ್ಷ ಸೇವೆ ಸಲ್ಲಿಸಿದ (ಪರಿಶಿಷ್ಟ ಜಾತಿ : ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಾಗಿದ್ದಲ್ಲಿ

1 ವರ್ಷ ಸೇವೆ ಸಲ್ಲಿಸಿದ) ಸರ್ಕಾರಿ ಹಾಗೂ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯದಲ್ಲಿರುವ ಅರೆಕಾಲಿಕ ಉಪನ್ಯಾಸಕರ ಸೇವೆಯನ್ನು ಖಾಲಿ ಹುದ್ದೆಗಳ ಲಭ್ಯತೆಯನ್ನು ಆಧರಿಸಿ ಖಾಯಂಗೊಳಿಸಲು ಸರ್ಕಾರ ನಿರ್ಧರಿಸಿದೆ.

ಷರತ್ತುಗಳನ್ನು ಅನುಬಂಧದಲ್ಲಿ ಲಗತ್ತಿಸಿದೆ.

೪) ಅರ್ಹ ಅರೆಕಾಲಿಕ ಉಪನ್ಯಾಸಕರನ್ನು ಅನುಮೋದಿತ ಖಾಲಿ ಹುದ್ದೆಗಳ ಲಭ್ಯತೆಯನ್ನು ಆಧರಿಸಿ ಕಾಲಾನುಕ್ರಮದಲ್ಲಿ ಸೇವಾ ಸಕ್ರಮಗೊಳಿಸಲಾಗುವುದು.

ಅನುಬಂಧ

ಅರೆಕಾಲಿಕ ಉಪನ್ಯಾಸಕರು ಸೇವಾ ಸಕ್ರಮಗೊಳ್ಳಬೇಕಾದಲ್ಲಿ ಪೂರೈಸಬೇಕಾದ ಕೆಲವು ಮುಖ್ಯ ಷರತ್ತುಗಳು.

1) ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳಲ್ಲಿ ಅರೆಕಾಲಿಕ ಉಪನ್ಯಾಸಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದು, ಸ್ನಾತಕೋತ್ತರ ಪದವಿಯಲ್ಲಿ ಶೇಕಡ 55 ಮತ್ತು ಅದಕ್ಕೂ ಹೆಚ್ಚು ಅಂಕಗಳನ್ನು ಪಡೆದಿದ್ದಲ್ಲಿ, ಹುದ್ದೆಗಳ ಲಭ್ಯತೆಯನ್ನು ಆಧರಿಸಿ: ಪದವಿ ಕಾಲೇಜುಗಳಲ್ಲಿ ಸೇವಾ ವಿಲೀನಗೊಳ್ಳಲು ಅರ್ಹತೆ ಪಡೆಯುತ್ತಾರೆ;

2) ಶೇಕಡ 55ಕ್ಕೂ ಕಡಿಮೆ ಅಂಕಗಳನ್ನು ಪಡೆದಿರುವ ಅರೆಕಾಲಿಕ ಉಪನ್ಯಾಸಕರನ್ನು ಹುದ್ದೆಗಳ ಲಭ್ಯತೆಯನ್ನು ಆಧರಿಸಿ ಪದವಿ ಪೂರ್ಣ ಕಾಲೇಜುಗಳಲ್ಲಿ ಸೇವಾ ವಿಲೀನಗೊಳ್ಳಲು ಅರ್ಹತೆ ಪಡೆಯುತ್ತಾರೆ;

3) 1994-95ನೇ ಶೈಕ್ಷಣಿಕ ವರ್ಷದ ಅಂತ್ಯಕ್ಕೆ ಸಂಬಂಧಿಸಿದಂತೆ ಸೇವೆಯಲ್ಲಿದ್ದು, ಕನಿಷ್ಠ 02 ವರ್ಷಗಳ ಸೇವೆ ಸಲ್ಲಿಸಬೇಕಾದದ್ದು ಕಡ್ಡಾಯವಿರುತ್ತದೆ;

4) ಪರಿಶಿಷ್ಟ ಜಾತಿ : ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಾಗಿದ್ದಲ್ಲಿ ಮೇಲಿನ ಷರತ್ತಿಗೆ ಸಂಬಂಧಿಸಿದಂತೆ ಕನಿಷ್ಠ 01 ವರ್ಷ ಸೇವೆ ಸಲ್ಲಿಸಿರಬೇಕು.

5) ಸೇವಾ ವಿಲೀನತೆಗೆ ಅರ್ಹತೆ ಹೊಂದಿರುವ ಅರೆಕಾಲಿಕ ಉಪನ್ಯಾಸಕರ ಹೆಸರುಗಳನ್ನು ಸರ್ಕಾರಕ್ಕೆ ಶಿಫಾರಸ್ಸು ಮಾಡಲು ಒಂದು ಅಥವಾ ಒಂದಕ್ಕಿಂತ ಹೆಚ್ಚು ಸಮಿತಿಗಳನ್ನು ರಚಿಸಲಾಗುವುದು.

6) ಸಮಿತಿ ಶಿಫಾರಸ್ಸು ಮಾಡಿದ ಅರೆಕಾಲಿಕ ಉಪನ್ಯಾಸಕರುಗಳನ್ನು ಖಾಲಿ ಹುದ್ದೆಗಳ ಲಭ್ಯತೆಯನ್ನು ಆಧರಿಸಿ ಕಾಲಾನುಕ್ರಮದಲ್ಲಿ ಸೇವೆಯಲ್ಲಿ ವಿಲೀನಗೊಳಿಸಲಾಗುವುದು.